# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | 975 |
| ಸದಸ್ಯರ ಹೆಸರು | ಶ್ರೀ ಎಸ್. ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | 24-02-2023 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ರೈತರು ಕೃಷಿ ಚಟುವಟಿಕೆಗಳನ್ನು ಮಾಡಲು ನೀಡುತ್ತಿರುವ ಬಿತ್ತನೆ ಬೀಜಗಳ ಪದಾರ್ಥಗಳು ಉತ್ತಮ ಗುಣಮಟ್ಟವಿಲ್ಲದೆ ರೈತರ ಬೆಳೆಗಳ ಇಳುವರಿಗಳು ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ರಾಜ್ಯದಲ್ಲಿ ರೈತರಿಗೆ ವಿತರಿಸಲು ಉದ್ದೇಶಿಸಲಾದ ಬಿತ್ತನೆ ಬೀಜಗಳನ್ನು ಬಿತ್ತನೆ ಪೂರ್ವದಲ್ಲಿ ವಿಶ್ಲೇಷಿಸಿದಾಗ, ಕೆಲವು ಮಾದರಿಗಳು ಕಡಿಮೆ ಗುಣಮಟ್ಟದಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಕಡಿಮೆ ಗುಣಮಟ್ಟದ ಬಿತ್ತನೆ ಬೀಜಗಳನ್ನು ಪೂರೈಸಿದ ಬೀಜ ಮಾರಾಟಗಾರರ ಮತ್ತು ಬೀಜೋತ್ಪಾದಕರ ವಿರುದ್ಧ ಬೀಜ ಕಾಯ್ದೆಗಳಡಿ ಕಾನೂನಾತ್ಮಕ ಕ್ರಮ ಕೈಗೊಳ್ಳಲಾಗುವುದು ಹಾಗೂ ಬೀಜಗಳ ಗುಣಮಟ್ಟದ ಬಗ್ಗೆ ಖಾತರಿಪಡಿಸಿಕೊಂಡು, ದೃಢೀಕೃತ/ಗುಣಮಟ್ಟದ ಬೀಜಗಳನ್ನು ವಿತರಿಸಲು ಮುಂಜಾಗ್ರುತೆವಹಿಸಲಾಗುತ್ತಿದೆ. |
| ಆ | ಬಂದಿದ್ದಲ್ಲಿ, ಉತ್ತಮ ಗುಣಮಟ್ಟದ ಬಿತ್ತನೆ ಬೀಜಗಳನ್ನು ನೀಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳು ಯಾವವು; | ಉತ್ತಮ ಗುಣಮಟ್ಟದ ಬಿತ್ತನೆ ಬೀಜಗಳನ್ನು ನೀಡಲು, ಸರ್ಕಾರದಿಂದ ಮುಂಜಾಗ್ರುತೆಯಾಗಿ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br>• ಕೃಷಿ ಇಲಾಖೆಯಿಂದ ನೀಡುವ ವಿವಿಧ ಬಗೆಯ ಬಿತ್ತನೆ ಬೀಜಗಳನ್ನು ಇಲಾಖಾ ರೈತ ಸಂಪರ್ಕ ಕೇಂದ್ರಗಳಲ್ಲಿ ದಾಸ್ತಾನೀಕರಿಸುವ ಮುನ್ನ ಸಂಬಂಧಪಟ್ಟ ಸಂಸ್ಥೆಗಳು ಬೀಜಗಳ ಗುಣಮಟ್ಟದ ಬಗ್ಗೆ ಖಾತರಿಪಡಿಸಿಕೊಂಡು, ದೃಢೀಕೃತ ಬೀಜಗಳನ್ನು ಮಾತ್ರ ದಾಸ್ತಾನೀಕರಿಸಲಾಗುತ್ತದೆ.<br>• ಹಂಗಾಮು ಪೂರ್ವದಲ್ಲಿ ಬೀಜ ವಿತರಣೆಗೂ ಮುನ್ನ ಇಲಾಖೆಯಲ್ಲಿ ದಾಸ್ತಾನೀಕರಿಸಿದ ಬಿತ್ತನೆ ಬೀಜಗಳಿಂದ ಬೀಜ ಪರಿವೀಕ್ಷಕರು ಬೀಜ ಮಾದರಿಗಳನ್ನು ತೆಗೆದು, ವಿಶ್ಲೇಷಣೆಗೊಳಪಡಿಸಿ, ಬೀಜಗಳ ಗುಣಮಟ್ಟವನ್ನು ಖಾತರಿಪಡಿಸಿಕೊಂಡ ನಂತರ ರೈತರಿಗೆ ವಿತರಿಸಲಾಗುತ್ತದೆ.<br>• ಒಂದು ವೇಳೆ, ಬೀಜಗಳು ಕಡಿಮೆ ಗುಣಮಟ್ಟದೆಂದು ಕಂಡುಬಂದಲ್ಲಿ ಅಂತಹ ಬಿತ್ತನೆ ಬೀಜಗಳನ್ನು ರೈತರಿಗೆ ವಿತರಿಸಲಾಗುವುದಿಲ್ಲ. ಹಾಗೂ ಅಂತಹ ಸಂಸ್ಥೆಗಳ ವಿರುದ್ಧ ಬೀಜ ಕಾಯ್ದೆಗಳನ್ವಯ ಕ್ರಮ ಕೈಗೊಳ್ಳಲಾಗುತ್ತದೆ. |

| | | |
|---|---|---|
| | | • ರೈತರಿಗೆ ಗುಣಮಟ್ಟದ ಬೀಜ ವಿತರಿಸಲು ರಾಜ್ಯದಲ್ಲಿ ಕೇಂದ್ರ ಸರ್ಕಾರ ರೂಪಿಸಿರುವ ಬೀಜ ಅಧಿನಿಯಮ-1966, ಬೀಜ ನಿಯಮಾವಳಿ- 1968 ಮತ್ತು ಬೀಜ ನಿಯಂತ್ರಣ ಆದೇಶ-1983 ಜಾರಿಯಲ್ಲಿದ್ದು, ಸದರಿ ಕಾಯಿದೆಗಳನ್ವಯ ಬೀಜ ಪರಿವೀಕ್ಷಕರುಗಳು ಅಧಿಸೂಚಿತವಾಗಿದ್ದು, ಬೀಜ ವಿತರಣೆಗೂ ಮುನ್ನ ಮಾರಾಟ ಮಳಿಗೆಗಳಿಂದ ಬೀಜ ಮಾದರಿಗಳನ್ನು ಸಂಗ್ರಹಿಸಿ ಬೀಜ ಪರೀಕ್ಷಾ ಪ್ರಯೋಗಾಲಯಗಳಲ್ಲಿ ವಿಶ್ಲೇಷಣೆಗೊಳಪಡಿಸಲಾಗುತ್ತದೆ.<br>• ಬೀಜ ಮಾದರಿಯು ಕಡಿಮೆ ಗುಣಮಟ್ಟದ್ದೆಂದು ತಿಳಿದುಬಂದಲ್ಲಿ, ಅಂತಹ ಮಾರಾಟಗಾರರು ಮತ್ತು ಬೀಜೋತ್ಪಾದಕರ ಮೇಲೆ ಸದರಿ ಕಾಯಿದೆಗಳನ್ವಯ ಕ್ರಮ ಜರುಗಿಸಲಾಗುತ್ತದೆ.<br>• ರಾಜ್ಯದಲ್ಲಿ ಕಡಿಮೆ ಗುಣಮಟ್ಟದ ಬೀಜ ಹಾವಳಿಯನ್ನು ತಡೆಗಟ್ಟಲು ಜಾಗೃತ ದಳ ರಾಜ್ಯ ಹಾಗೂ ವಿಭಾಗೀಯ ಮಟ್ಟದಲ್ಲಿ ಅಸ್ತಿತ್ವದಲ್ಲಿದೆ.<br>• ಪ್ರಸ್ತುತ ಸಾಲಿನಲ್ಲಿ ರಾಜ್ಯದಲ್ಲಿ ಕಡಿಮೆ ಗುಣಮಟ್ಟದ ಬೀಜಗಳನ್ನು ಪೂರೈಸಿದ ಸಂಸ್ಥೆಗಳ ವಿರುದ್ಧ 206 ಪ್ರಕರಣಗಳಲ್ಲಿ ನ್ಯಾಯಾಲಯ ಮೊಕದ್ದಮೆ ದಾಖಲಿಸಲಾಗಿರುತ್ತದೆ.<br>• ಕಡಿಮೆ ಗುಣಮಟ್ಟದ ಬಿತ್ತನೆ ಬೀಜಗಳ ಪೂರೈಕೆಯಿಂದ ರೈತರಿಗೆ ಬೆಳೆ ನಷ್ಟವಾದಲ್ಲಿ, ರೈತರು ಗ್ರಾಹಕರ ವೇದಿಕೆಯಲ್ಲಿ ದೂರು ದಾಖಲಿಸಿ, ಬೀಜಗಳ ಗುಣಮಟ್ಟದಿಂದ ಬೆಳೆ ನಷ್ಟವಾಗಿರುವುದು ದೃಢಪಟ್ಟಲ್ಲಿ ನಿಯಮಾನುಸಾರ ಪರಿಹಾರ ಪಡೆದುಕೊಳ್ಳಬಹುದಾಗಿರುತ್ತದೆ. |

ಸಂಖ್ಯೆ: AGRI/42/ACT/2023

(ಬಿ.ಸಿ. ಪಾಟೀಲ್)
ಕೃಷಿ ಸಚಿವರು